# ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕೋರ್ಟ, ಬಸವನ ಬಾಗೇವಾಡಿ.

**ಸಿ.ಸಿ. 612/2016**

| | |
|---|---|
| **ಹೆಸರು** | ವಿಕಾಸ ಲಮಾಣಿ |
| **ತಂದೆಯ ಹೆಸರು** | ಪಾಂಡಪ್ಪ |
| **ವಯಸ್ಸು** | 43 ವರ್ಷ |
| **ವೃತ್ತಿ** | ಸಿ ಪಿ ಐ ಹಗರಿಬೊಮ್ಮನಹಳ್ಳಿ |
| **ವಿಳಾಸ** | ಹಗರಿಬೊಮ್ಮನಹಳ್ಳಿ |

**ಸಾಕ್ಷಿಯನ್ನು ಇಂದು ವಿಡಿಯೋ ಕಾನ್ಫರೆನ್ಸ್ ಮುಖಾಂತರ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು. ದಿನಾಂಕಃ 04.05.2026**

**<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ</u>**,

1. ನಾನು ದಿನಾಂಕಃ 22.10.2014 ರಿಂದ 13.10.2016 ರವರೆಗೆ ನಿಡಗುಂದಿ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಅಂತ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 31.03.2016 ರಂದು ನಾನು ಈ ಪ್ರಕರಣದ ಕಡತವನ್ನು ಚಾಸಾ-9 ರವರಿಂದ ಪಡೆದು ಪರಿಶೀಲಿಸಿರುತ್ತೇನೆ. ಅದೇ ದಿನ ನಾನು ಬೆಳಿಗ್ಗೆ 09 ಗಂಟೆಯಿಂದ 10 ಗಂಟೆಯವರೆಗೆ ಚಾಸಾ-1 ರವರು ತೋರಿಸಿದಂತೆ ಎನ್ ಎಚ್-50 ರಸ್ತೆಯ ಬಾಜು ಬ.ಬಾಗೇವಾಡಿ ಕ್ರಾಸ್ ನಲ್ಲಿಯ ಬಸ್ ಸ್ಟ್ಯಾಂಡ್ ಹತ್ತಿರ ಚಾಸಾ-2 ಮತ್ತು 3 ರವರ ಸಮಕ್ಷಮದಲ್ಲಿ ಕೃತ್ಯ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಅದೇ ದಿನ ನಾನು ಚಾಸಾ-4 ರಿಂದ 7 ರವರನ್ನು ವಿಚಾರಣೆ ಮಾಡಿ ಅವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

3. ದಿಃ 22.04.2016 ರಂದು ನಾನು ಆರೋಪಿತರ ವಿರುದ್ಧ ದಸ್ತಗಿರಿ ಕ್ರಮಗಳನ್ನು ಅನುಸರಿಸಿ ಆರೋಪಿತರಿಂದ ಸೂಕ್ತ ಭದ್ರತೆಯನ್ನು ಪಡೆದು ಮಾನ್ಯ ನ್ಯಾಯಾಲಯದ ಆದೇಶದ ಪ್ರಕಾರ ಜಾಮೀನಿನ ಮೇಲೆ ಬಿಡುಗಡೆಗೊಳಿಸಿರುತ್ತೇನೆ. ನಂತರ ನಾನು ದಿಃ 26.05.2016 ರಂದು ಚಾಸಾ-1 ರವರು ಗಾಯದ ಪ್ರಮಾಣ ಪತ್ರವನ್ನು ಚಾಸಾ-8 ರವರಿಂದ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ನಾನು ಆರೋಪಿತರ ವಿರುದ್ಧ ಸಾಕ್ಷ್ಯಾಧಾರಗಳು ಲಭ್ಯವಾದ ಕಾರಣ ದೋಷರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

4. ಸಾಕ್ಷಿಯು ಕೃತ್ಯ ನಡೆದ ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ-2 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಒಂದು ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ಕ್ರಮವಾಗಿ ನಿಪಿ-3 ಎಂದು ಗುರುತಿಸಲಾಗಿರುತ್ತದೆ, ಸಾಕ್ಷಿಯ ಸಹಿಯನ್ನು ನಿಪಿ-3 ಬಿ ಎಂದು ಗುರುತಿಸಲಾಯಿತು.

5. ನಾನು ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ 1 ನೇ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. ಈ ದಿನ 2 ನೇ ಆರೋಪಿಯು ನ್ಯಾಯಾಲಯದಲ್ಲಿ ಗೈರು ಹಾಜರಾಗಿದ್ದು, ಸದರಿ ಆರೋಪಿತರ ಗುರುತಿಸುವಿಕೆಯ ಬಗ್ಗೆ ತಕರಾರು ಇಲ್ಲ ಎಂದು ಆರೋಪಿತರ ಪರ ವಕೀಲರು ಹೇಳಿರುತ್ತಾರೆ.

**<u>ಪಾಟಿ ಸವಾಲುಃ ಆರೋಪಿತರ ಪರವಾಗಿ .ಶ್ರೀ ಐ.ಎ.ಪಿ ವಕೀಲರ ಪರವಾಗಿ ಆರ್.ಡಿ.ಜೆ ವಕೀಲರಿಂದಃ</u>**

**1.** ನಾನು ದಿಃ 31.03.2016 ರಂದು ನಾನು ಪಂಚರ ಸಮಕ್ಷಮದಲ್ಲಿ ಯಾವುದೇ ಸ್ಥಳದ ಪಂಚನಾಮೆಯನ್ನು ಮಾಡಿಲ್ಲ ಎಂದರೆ ಸರಿಯಲ್ಲ. ಅದೇ ರೀತಿಯಾಗಿ ನಾನು ಈ ಪ್ರಕರಣದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಈ ಪ್ರಕರಣದಲ್ಲಿ ಚಾಸಾ-1 ರವರ ಗಾಯದ ಪ್ರಮಾಣ ಪತ್ರಗಳನ್ನು ಚಾಸಾ-8 ರವರಿಂದ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ಯಾವುದೇ ಆರೋಪಗಳು ನನ್ನ ತನಿಖಾವಧಿಯಲ್ಲಿ ಕಂಡು ಬರದೇ ಇದ್ದರೂ ಕೂಡ ಚಾಸಾ-1 ರವರಿಗೆ ಸಹಾಯ ಮಾಡಲು ಆರೋಪಿತರ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u> ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ** ವಿಡಿಯೋ ಕಾನ್ಫರೇನ್ಸ ಮುಖಾಂತರ ಬೆಳಿಗ್ಗೆ 10.15 ರಿಂದ 10.30 ಗಂಟೆಯವರೆಗೆ **ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸರಿ ಇದೆ.**

**1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ.**
**ಬಸವನ ಬಾಗೇವಾಡಿ.**